ಓ.ಎಸ್. ನಂಃ 54/2025

ಪಿ.ಡಬ್ಲ್ಯೂಃ 1

**ದಿನಾಂಕ 24.09.2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ.ಕೆ.ಬಿ.ಜಿ. ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ದಿಃ 27.01.2022 ರ ಆನ್ ಡಿಮಾಂಡ್ ಪ್ರೊನೋಟ್ ಮತ್ತು ಹಣ ಸಂದಾಯ ರಸೀದಿ ನಿಪಿ.1 ಎಂದು, ನಿಪಿ.1 ರಲ್ಲಿ ಪ್ರತಿವಾದಿಯ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.1(ಎ) ಮತ್ತು ನಿಪಿ.1(ಬಿ) ಎಂದು, ದಿಃ 02.07.2024 ರ ಕಾನೂನು ತಿಳುವಳಿಕೆ ನೋಟಿಸನ್ನು ನಿಪಿ.2 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ.3 ಎಂದು ಗುರುತಿಸಲಾಯಿತು.

**ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**
**ಕೆ.ಆರ್.ನಗರ**